ಟಿಪ್ಪು ವಿವಾದ | ಸಿದ್ದರಾಮಯ್ಯ ಸರ್ಕಾರ ಆರಂಭಿಸಿದ್ದ ಕಾರ್ಯಕ್ರಮ

# ಟಿಪ್ಪು ಜಯಂತಿ ರದ್ದು: ರಾಜ್ಯ ಸರ್ಕಾರದ ಆದೇಶ

## ಬಿಎಸ್‌ವೈ ಅಧಿಕಾರಕ್ಕೆ ಬಂದು ಮೂರೇ ದಿನದಲ್ಲಿ ರದ್ದು

## ಸರ್ಕಾರಿ ಆಚರಣೆ ಇಲ್ಲ, ಖಾಸಗಿ ಆಚರಣೆಗೆ ಅಡ್ಡಿಯಿಲ್ಲ

31/7/19

**● ಕನ್ನಡಪ್ರಭ ವಾರ್ತೆ ಬೆಂಗಳೂರು**



ಹಿಂದಿನ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ಆರಂಭಿಸಿದ್ದ ಮೈಸೂರು ಹುಲಿ ಎಂದೇ ಕರೆಯಲ್ಪಡುವ ಟಿಪ್ಪು ಸುಲ್ತಾನ್ ಜಯಂತಿಯನ್ನು ಬಿಜೆಪಿ ನೇತೃತ್ವದ ಸರ್ಕಾರ ಅಸ್ತಿತ್ವಕ್ಕೆ ಬರುತ್ತಿದ್ದಂತೆ ರದ್ದುಗೊಳಿಸಿದೆ.

ನೂತನ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಸೂಚನೆ ಮೇರೆಗೆ ತಕ್ಷಣದಿಂದಲೇ ಜಾರಿಗೆ ಬರುವಂತೆ ಹಜರತ್ ಟಿಪ್ಪು ಸುಲ್ತಾನ್ ಜಯಂತಿಯನ್ನು ರದ್ದುಗೊಳಿಸಿ ಮಂಗಳವಾರ ಆದೇಶ ಹೊರಡಿಸಿ ಸರ್ಕಾರ ಆದೇಶ ಹೊರಡಿಸಿದೆ. ಜಿಲ್ಲೆಯ ಶಾಸಕರಾದ ಕೆ.ಜಿ.ಬೋಪಯ್ಯ, ಅಪ್ಪಚ್ಚು ರಂಜನ್ ಹಾಗೂ ಸುನೀಲ್ ಸುಬ್ರಮಣಿ ಅವರು ಬರೆದ ಪತ್ರಗಳ ಆಧಾರದ ಮೇಲೆ ಸೋಮವಾರ ನಡೆದ ಸಚಿವ ಸಂಪುಟದಲ್ಲಿ ತೀರ್ಮಾನ ಕೈಗೊಂಡು ಟಿಪ್ಪು ಜಯಂತಿಯನ್ನು ರದ್ದುಗೊಳಿಸಲಾಗಿದೆ ಎಂದು ಆದೇಶದಲ್ಲಿ ಪ್ರಸ್ತಾಪಿಸಲಾಗಿದೆ.

ಕೊಡಗಿನಲ್ಲಿ 2016ರಲ್ಲಿ ಟಿಪ್ಪು ಜಯಂತಿ ವೇಳೆ ಭಾರೀ ಗಲಭೆಗಳಾಗಿ ಕುಟ್ಟಪ್ಪ ಎನ್ನುವ ವ್ಯಕ್ತಿ ಸಾವನ್ನಪ್ಪಿದ್ದರು. ಇದರಿಂದ ಹಿಂಸಾಚಾರ ನಡೆದು ಸಾಮರಸ್ಯ ಹಾಳಾಗಿದೆ. ಸಾರ್ವಜನಿಕರ ಮತ್ತು ಸರ್ಕಾರಿ ಆಸ್ತಿ-ಪಾಸ್ತಿಗಳಿಗೆ ಅಪಾರ ಹಾನಿಯಾಗಿದೆ. ಜಿಲ್ಲೆಯಲ್ಲಿ ಇಂದಿಗೂ ಅಶಾಂತಿಯ ವಾತಾವರಣ ಇದೆ. ➘9

[illegible] | ಶಾಸಕರ ಮನವಿ ಮೇರೆಗೆ ಬಿಜೆಪಿ ಸರ್ಕಾರ ಕ್ರಮ

# ಟಿಪ್ಪು ಜಯಂತಿ ರದ್ದು: ಆದೇಶ

ಕಪ್ರ 31/7/19

**● ಮೊದಲ ಪುಟದಿಂದ**

ಹೀಗಾಗಿ ಟಿಪ್ಪು ಜಯಂತಿಯನ್ನು ರದ್ದುಗೊಳಿಸಬೇಕು ಎಂದು ಪತ್ರದಲ್ಲಿ ಕೆ.ಜಿ.ಬೋಪಯ್ಯ ಮತ್ತಿತರರು ಮನವಿ ಮಾಡಿದ್ದರು. ಇದಕ್ಕೆ ಸ್ಪಂದಿಸಿದ ಯಡಿಯೂರಪ್ಪ ತಕ್ಷಣದಿಂದ ಜಾರಿ ಬರುವಂತೆ ಆದೇಶಿಸಿ ಟಿಪ್ಪು ಜಯಂತಿಗೆ ತಿಲಾಂಜಲಿ ಹೇಳಿದ್ದಾರೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರವು ಟಿಪ್ಪು ಸುಲ್ತಾನ್ ಜಯಂತಿಯನ್ನು ಪ್ರಥಮವಾಗಿ ಅಲ್ಪಸಂಖ್ಯಾತರ ಇಲಾಖೆಯಿಂದ ಆಚರಣೆ ಮಾಡಿತು. ನಂತರ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ವರ್ಗಾಯಿಸಲಾಯಿತು.

ಇದೀಗ ಬೋಪಯ್ಯ ಮತ್ತಿತರರು ಬರೆದು, ಪ್ರತಿ ವರ್ಷ ಸರ್ಕಾರಿ ಕಾರ್ಯಕ್ರಮವನ್ನಾಗಿ ಟಿಪ್ಪು ಜಯಂತಿಯನ್ನು ಆಚರಿಸಲಾಗುತ್ತಿದೆ. ಟಿಪ್ಪು ಜಯಂತಿ ಆಚರಣೆ ವಿರುದ್ಧ ಕೊಡಗು ಜಿಲ್ಲೆಯಲ್ಲಿ ತೀವ್ರ ಪ್ರತಿಭಟನೆಗಳು ನಡೆದಿವೆ. ಜಿಲ್ಲೆಯ ಜನರಲ್ಲೂ ಜಯಂತಿಯ ವಿರುದ್ಧ ಇದ್ದಾರೆ. ಜಿಲ್ಲೆಯಲ್ಲಿ ಅಶಾಂತಿ ತಲೆದೋರಿರುವ ಕಾರಣ ಜಯಂತಿಯನ್ನು ರದ್ದುಗೊಳಿಸಬೇಕು ಎಂದು ಕೋರಿದ್ದಾರೆ. ಈ ಮನವಿ ಮೇರೆಗೆ ಸಚಿವ ಸಂಪುಟ ಸಭೆಯಲ್ಲಿ ನಿರ್ಣಯ ಕೈಗೊಂಡು ರಾಜ್ಯಾದ್ಯಂತ ಆಚರಣೆ ಮಾಡುತ್ತಿರುವ ಟಿಪ್ಪು ಜಯಂತಿಯನ್ನು ರದ್ದುಗೊಳಿಸಲು ಆದೇಶಿಸಲಾಗಿದೆ ಎಂದು ಸರ್ಕಾರ ತಿಳಿಸಿದೆ.

ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಜಾರಿಗೊಳಿಸಿದ್ದ ಟಿಪ್ಪು ಜಯಂತಿಯನ್ನು ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ನೇತೃತ್ವದ ಮೈತ್ರಿ ಸರ್ಕಾರವು ಮುಂದುವರಿಸಿತ್ತು. ಟಿಪ್ಪು ಜಯಂತಿ ಆಚರಣೆ ಕೈಬಿಡಬೇಕು ಎಂದು ಬಿಜೆಪಿ ಪ್ರತಿಭಟನೆ ನಡೆಸಿ ಸರ್ಕಾರದ ಮೇಲೆ ಒತ್ತಡ ಹಾಕುತ್ತಿತ್ತು. ಆದರೆ, ಕರ್ನಾಟಕ ಸರ್ವಜನಾಂಗದ ಶಾಂತಿ ತೋಟ ಎಂದು ರಾಷ್ಟ್ರಕವಿ ಕುವೆಂಪು ಹೇಳಿದ್ದು, ಅಂತೆಯೇ ಟಿಪ್ಪು ಜಯಂತಿ ಆಚರಣೆ ಮಾಡಲಾಗುತ್ತಿದೆ ಎಂದು ಹಿಂದಿನ ಸರ್ಕಾರಗಳು ಸಮಜಾಯಿಷಿ ನೀಡಿದ್ದವು. ಟಿಪ್ಪು ಜಯಂತಿ ವೇಳೆ ಗಲಭೆಯಾದಾಗ ಅದನ್ನು ರಾಜಕೀಯವಾಗಿ ಬಳಕೆ ಮಾಡಲಾಗುತ್ತಿದೆ ಎಂದು ಕಾಂಗ್ರೆಸ್ ಆರೋಪ ಮಾಡಿತ್ತು. ಅಧಿಕಾರಕ್ಕೆ ಬಂದ ನಾಲ್ಕು ದಿನದಲ್ಲಿಯೇ ಬಿಜೆಪಿ ಸರ್ಕಾರವು ಟಿಪ್ಪು ಜಯಂತಿ ರದ್ದುಗೊಳಿಸಿದೆ.

**ಸೋಮವಾರ ಸಂಪುಟ ಸಭೆ ನಡೆಯಿತಾ?:** ಟಿಪ್ಪು ಜಯಂತಿ ರದ್ದುಗೊಳಿಸುವ ಬಗ್ಗೆ ಸೋಮವಾರ (ಜು.29) ನಡೆದ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಸರ್ಕಾರದ ಆದೇಶದಲ್ಲಿ ತಿಳಿಸಲಾಗಿದೆ. ಆದರೆ, ಸೋಮವಾರ ಸಂಪುಟ ಸಭೆ ನಡೆದಿರುವ ಬಗ್ಗೆ ಸರ್ಕಾರ ಯಾವುದೇ ಮಾಹಿತಿ ನೀಡಿಲ್ಲ.

3